<u>ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ ರೋಣ</u>

**<u>ಸಿ.ಸಿ. ನಂ.838/2020</u>**

**ಫಿರ್ಯಾದಿದಾರರು** - ಕರ್ನಾಟಕ ಸರ್ಕಾರ (ರೋಣ ಅಬಕಾರಿ ವಲಯ)

**ವಿರುದ್ಧ**

**ಆರೋಪಿತರು**

1) ಮಂಜುನಾಥ ತಂದೆ ಬಸಪ್ಪ ಕರಡಿಯವರ,
ವಯಾಃ 288 ವರ್ಷ,
ಸಾಃ ಮಾಳವಾಡ, ತಾಃ ರೋಣ, ಜಿಃ ಗದಗ.

2) ಮಲ್ಲಯ ತಂದೆ ಮಗುಂಡಯ್ಯ ಗಣಚಾರಿ,
ಸಾಃ ಮಾಳವಾಡ, ತಾಃ ರೋಣ, ಜಿಃ ಗದಗ.

**<u>ದೋಷಾರೋಪಣೆ</u>**

**ಶ್ರೀ. ಆದಿತ್ಯ ಆರ್. ಕಲಾಲ್,** ಬಿ.ಎ.ಎಲ್., ಎಲ್.ಎಲ್.ಬಿ., ಎಲ್.ಎಲ್.ಎಂ., ಹೆಚ್ಚುವರಿ ದಿವಾಣಿ ನ್ಯಾಯಧೀಶರು ಮತ್ತು ಜೆ.ಎಂ.ಎಫ್.ಸಿ., ರೋಣ ಆದ ನಾನು ನಿಮ್ಮ ವಿರುದ್ಧ ಮಾಡುತ್ತಿರುವ ದೋಷಾರೋಷಣೆ ಏನೆಂದರೆಃ-

ದಿನಾಂಕ 05/04/2020 ರಂದು ಸಾಯಂಕಾಲ 04-30 ಗಂಟೆ ಸುಮಾರಿಗೆ ರೋಣ ವಲಯ ಸರಹದ್ದಿಗೆ ಸೇರಿದ ಗಜೇಂದ್ರಗಡ ತಾಲೂಕಿನ ನೆಲ್ಲೂರ ತಾಂಡಾದಿಂದ ಮುಶಿಗೇರಿ ಗ್ರಾಮಕ್ಕೆ ಹೋಗುವ ಸರ್ಕಾರಿ ರಸ್ತೆಯಲ್ಲಿ ಬರುವ ನೆಲ್ಲೂರ ಕ್ರಾಸ್ ಹತ್ತಿರ ಆರೋಪಿತರಾದ ನೀವುಗಳು ಯಾವುದೇ ಪಾಸ ವ ಪರ್ಮಿಟ ಇಲ್ಲದೆ ತಮ್ಮ ಸ್ವಂತ ಲಾಭಕ್ಕೋಸ್ಕರ ಅನಧಿಕೃತವಾಗಿ ಎರಡು ಪ್ಲಾಸ್ಟೀಕ್ ಬಾಟಲಿಗಳಲ್ಲಿ 04 ಲೀಟರನಷ್ಟು ಕಳ್ಳಭಟ್ಟಿ ಸರಾಯಿಯನ್ನು ನೀಮ್ಮ ತಾಬಾದಲ್ಲಿ ಇಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

2. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಮೇಲೆ ಹೇಳಿದ ಕಳ್ಳಭಟ್ಟಿ ಸರಾಯಿಯನ್ನು ಸಾರ್ವಜನಿಕರಿಗೆ ಮಾರಾಟ ಮಾಡುವ

ಉದ್ದೇಶದಿಂದ ಅಕ್ರಮವಾಗಿ ಸಂಗ್ರಹಿಸಿಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ **38(ಎ)** ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

3. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ದ್ವಿಚಕ್ರ ವಾಹನ ನೋಂದಣಿ ಸಂಖ್ಯೆ ಕೆಎ-26/ಇಸಿ-4212 ನೇದ್ದರಲ್ಲಿ ಮೇಲೆ ಹೇಳಿದ ಕಳ್ಳಭಟ್ಟಿ ಸರಾಯಿಯನ್ನು ಸಾರ್ವಜನಿಕರಿಗೆ ಮಾರಾಟ ಮಾಡುವ ಉದ್ದೇಶದಿಂದ ಅಕ್ರಮವಾಗಿ ಸಂಗ್ರಹಿಸಿಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ **43** ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

4. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಸದರಿ ಕಳ್ಳಭಟ್ಟಿ ಸರಾಯಿಯು ಮಾನವನ ದೇಹಕ್ಕೆ ಹಾನಿಕಾರಕ ಅಂತಾ ಗೊತ್ತಿದ್ದರೂ ಸಹ ಅಕ್ರಮವಾಗಿ ಮಾರಾಟ ಮಾಡುವ ಉದ್ದೇದಿಂದ ಸಂಗ್ರಹಿಸಿಟ್ಟುಕೊಂಡಿರುತ್ತೀರಿ ಎಂದು, ಈ ಮೂಲಕ ಭಾ.ದಂ.ಸಂ. ಕಲಂ **273** ಸಹವಾಚಕ ಕಲಂ **34** ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರೆಂದು ದೋಷಾರೋಪಣೆ ಮಾಡುತ್ತಿದ್ದೇನೆ.

ಮೇಲ್ಕಂಡ ಆರೋಪಗಳನ್ನು ಆರೋಪಿತರಾದ ನೀವು ಈ ನ್ಯಾಯಲಯದ ವಿಚಾರಣಾ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು, ಸದರಿ ಆರೋಪಗಳಿಗೆ ನನ್ನ ಮುಂದೆ ವಿಚಾರಣೆಗೆ ಒಳಪಡಬೇಕೆಂದು ಈ ಮೂಲಕ ನಿರ್ದೇಶಿಸುತ್ತಿದ್ದೇನೆ.

ದಿನಾಂಕಃ-

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ. ನ್ಯಾಯಾಲಯ, ರೋಣ.

<u>ಆರೋಪಿತರ ಹೇಳಿಕೆ</u>

1. ಈ ಮೇಲೆ ಓದಿ ಹೇಳಿದ ದೋಷರೋಪಣೆಯು ನಿಮಗೆ ಅರ್ಥವಾಯಿತೆ?

ಉತ್ತರಃ ಆರೋಪಿ-1)

ಆರೋಪಿ-2)

2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರೋ? ವಿಚಾರಣೆಯಾಗಬೇಕೆಂದು ಬಯಸುವಿರೋ?
ಉತ್ತರಃ ಆರೋಪಿ-1)
ಆರೋಪಿ-2)

(ಮೇಲೆ ಹೇಳಿದ ದೋಷರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿ ತಿಳಿಸಿ, ಸದರಿ ಆರೋಪಿತರು ನೀಡಿದ ಉತ್ತರಗಳನ್ನು ತೆರೆದ ನ್ಯಾಯಲಯದಲ್ಲಿ ದಿನಾಂಕ 13/11/2024 ರಂದು ದಾಖಲಿಸಿದೆ.)

ದಿನಾಂಕಃ- /2024

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ. ನ್ಯಾಯಾಲಯ, ರೋಣ.

ಆರೋಪಿತರ ಸಹಿಃ